# ಕರ್ನಾಟಕ ಸರ್ಕಾರ
## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.
## ಸಿ.ಸಿ.ನಂ.884/2014

ಪಿ.ಡಬ್ಲ್ಯೂ: 27
ಸಿ.ಡಬ್ಲ್ಯೂ: 28

ಸಾಕ್ಷಿದಾರರ ಹೆಸರು : ಶ್ರೀನಿವಾಸ
ತಂದೆಯ ಹೆಸರು : ರಾಮಯ್ಯ
ವಯಸ್ಸು :71 ವರ್ಷ
ಉದ್ಯೋಗ : ಕೂಲಿ ಕೆಲಸ
ವಾಸಸ್ಥಳ : ತರೀಕೆರೆ

**ದಿನಾಂಕ: 24-08-2021 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ : ಸ.ಸ.ಅ. ರವರಿಂದ**

2013 ನೇ ಇಸವಿಯಲ್ಲಿ ಸಂಜೆ 4-00 ರಿಂದ 5-00 ಗಂಟೆ ಸಮಯದಲ್ಲಿ ತರೀಕೆರೆಯ ಕಾವೇರಿ ಗ್ರಾಮೀಣ ಬ್ಯಾಂಕಿನಲ್ಲಿ ನಕಲಿ ಬಂಗಾರ ಇಟ್ಟು ಹಾಗೂ ಚಾಸಾ-8, 12, 13 ರವರ ನಕಲಿ ಸಹಿ ಮಾಡಿದ್ದಾರೆ ಎನ್ನುವ ಕಾರಣಕ್ಕೆ ಪೊಲೀಸರು ಮಹಜರ್ ಮಾಡಿ ನನ್ನ ಸಹಿ ಪಡೆದಿರುತ್ತಾರೆ. ಆ ಸಮಯದಲ್ಲಿ ಚಾಸಾ-27 ರವರು ಸಹ ಸಹಿ ಮಾಡಿರುತ್ತಾರೆ. ನ್ಯಾಯಾಲಯದ ಮುಂದಿರುವ ಆರೋಪಿಯನ್ನು ನಾನು ನೋಡಿರುವುದಿಲ್ಲ. ನನ್ನ ಸಮಕ್ಷಮ ಇನ್ನು 2-3 ಜನ ಸಹಿ ಮಾಡಿದ್ದು, ಅವರ ಹೆಸರು ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ-28 ರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-28(ಬಿ) ಎಂದು ಗುರುತಿಸಲಾಯಿತು. ನಾನು ಸಹಿ ಮಾಡಿ ಈಗ್ಗೆ 9-10 ವರ್ಷಗಳಾಗಿದ್ದರಿಂದ ನನಗೆ ಎಲ್ಲಾ ವಿಷಯ ಸರಿಯಾಗಿ ನೆನಪಿಗೆ ಬರುತ್ತಿಲ್ಲ.

**ಪಾಟೀ ಸವಾಲು : ಆರೋಪಿ ಪರ ಶ್ರೀ ಎಂ ಕೆ ಟಿ ವಕೀಲರಿಂದ.**

ನಿಪಿ-28 ನ್ನು ನಾನು ಓದಿ ಸಹಿ ಹಾಕಿರುತ್ತೇನೆ. ಪೊಲೀಸರು ವಿಷಯ ಹೇಳಿ ತಿಳಿಸಿದ್ದಕ್ಕೆ ಸಹಿ ಹಾಕಿರುತ್ತೇನೆ ಎಂದರೆ ಸರಿ. ಯಾರ ಯಾರ ಬಂಗಾರ ಎಷ್ಟು ಇತ್ತು ಎಂದು ನಾನು ತಿಳಿದುಕೊಂಡಿಲ್ಲ. ಪೊಲೀಸರು ಮಹಜರ್ ಸಮಯದಲ್ಲಿ ಮಾಡಿದ ಕ್ರಮ ನನಗೆ ಸರಿಯಾಗಿ ಗೊತ್ತಿಲ್ಲ ಎಂದರೆ ಸರಿ. ಸದರಿ ಬ್ಯಾಂಕಿನಲ್ಲಿ ನಾನು ಖಾತೆ ಹೊಂದಿಲ್ಲ. ನನಗೆ ಯಾವುದೇ ವಿಷಯ ಗೊತ್ತಿಲ್ಲದಿದ್ದರೂ ಸಹ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ: ಇರುವುದಿಲ್ಲ.**

*(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)*

ಓ. ಕೇ. ಸ. ಇ. ಎ. ಒ.

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

ಪ್ರ.ದ.ನ್ಯಾ.ದಂ.ರವರು,ತರೀಕೆರೆ.